ಸಿ ಮಿಸ್ ಸಂಖ್ಯೆ 458 /2025

ಪಿ ಡಬ್ಲ್ಯೂ 1

**ದಿನಾಂಕ :** 06.04.2026 **ರಂದು ಸಾಕ್ಷಿದಾರರನ್ನು ಕರೆಸಿ ಪ್ರಮಾಣ ವಚನ ಬೋಧಿಸಲಾಯಿತು.**

**ಮುಖ್ಯ ವಿಚಾರಣೆಃ – ಅರ್ಜಿದಾರರ ಪರವಾಗಿ ಶ್ರೀಮತಿ ಎಂ ಎಲ್ ವಕೀಲರಿಂದಃ**

ನಾನು ಈ ಅರ್ಜಿಯಲ್ಲಿ ಅರ್ಜಿದಾರಳಾಗಿರುತ್ತೇನೆ. ನಾನು ನನ್ನ ಮುಖ್ಯ ವಿಚಾರಣೆಯ ಬದಲಾಗಿ ಪ್ರಮಾಣ ಪತ್ರವನ್ನು ಹಾಜರುಪಡಿಸಿದ್ದೇನೆ. ಅದನ್ನು ನಾನು ನನ್ನ ವಕೀಲರಿಗೆ ಹೇಳಿ ಬರೆಸಿರುತ್ತೇನೆ. ಅದರಲ್ಲಿರುವ ಸಂಗತಿಗಳೆಲ್ಲಾ ಸತ್ಯವಿರುತ್ತದೆ ಮತ್ತು ಅದರಲ್ಲಿರುವ ಸಹಿ ನನ್ನದೇ ಆಗಿರುತ್ತದೆ. ನಾನು ಕೆಲವು ದಾಖಲೆಗಳನ್ನು ಹಾಜರು ಪಡಿಸಿದ್ದು, ಅವುಗಳನ್ನು ನಿಶಾನೀಕರಿಸಬೇಕೆಂದು ಪ್ರಾರ್ಥಿಸುತ್ತೇನೆ.

ವಿವಾಹ ಆಮಂತ್ರಣ ಪತ್ರಿಕೆಯನ್ನು ನಿಪಿ–1 ಎಂದು, ಎರಡು ಫೋಟೋಗಳನ್ನು ನಿಪಿ–2 ಮತ್ತು ನಿಪಿ–3 (ನಿಪಿ– 2 ಮತ್ತು ನಿಪಿ–3 ಅನ್ನು ಭಾರತೀಯ ಸಾಕ್ಷ್ಯ ಅಧಿನಿಯಮ ಕಲಂ 63 ರಡಿ ದೃಡೀಕರಣ ಹಾಜರು ಪಡಿಸುವ ತಕರಾರಿಗೆ ಒಳಪಟ್ಟು ನಿಶಾನಿಸಲಾಗಿದೆ. ) ಎಂದು, ನನ್ನ ಎರಡು ಮಕ್ಕಳ ಜನನ ಪ್ರಮಾಣಪತ್ರವನ್ನು ನಿಪಿ–4 ಮತ್ತು ನಿಪಿ–5 ಎಂದು ಗುರುತಿಸಲಾಯಿತು.

**ಮುಂದುವರೆದ ಮುಖ್ಯ ವಿಚಾರಣೆಗೆ ಸಮಯಾವಕಾಶ ಕೋರಿದ್ದು ಸಮಯಾವಕಾಶ ನೀಡಿ ಮುಂದೂಡಲಾಯಿತು.**

( ತೆರೆದ ನ್ಯಾಯಾಲಯದಲ್ಲಿ ನನ್ನ ಉಕ್ತಲೇಖನದಿಂದ ಬೆರಳಚ್ಚು ಪಡಿಸಲಾಯಿತು.)

ಓ ಹೇ ಕೇ ಸ ಇದೆ

(ಕಾವ್ಯಶ್ರೀ. ಎಂ )
ಪ್ರಧಾನ ಸಿವಿಲ್ ನ್ಯಾಯಾಧೀಶರು ಮತ್ತು
ಜೆ ಎಂ ಎಫ್ ಸಿ., ಕೊಳ್ಳೇಗಾಲ